All India Radio: Bangalore
National Bulletin In Kannada
07.11.2026 1.10 p.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
07.11.2026 1.10 p.m.
<><><><>

ಮುಖ್ಯಾಂಶಗಳು

1. ವಂದೇ ಮಾತರಂ ಗೀತೆಗೆ ೧೫೦ ವರ್ಷ: ಇದು ರಾಷ್ಟ್ರದ ಅಸ್ಮಿತೆ, ತಾಯ್ನೆಲದ ಗೌರವದ ಪ್ರತೀಕ - ರಾಷ್ಟ್ರಪತಿ ದ್ರೌಪದಿ ಮುರ್ಮು
2. ಕರ್ನಾಟಕ ಸೇರಿ ದಕ್ಷಿಣ ಭಾರತದ ರಾಜ್ಯಗಳಿಗೆ 'ಭಾರತ್ ರೈಸ್' ಅಕ್ಕಿ ಹಂಚಿಕೆ: ಬೆಲೆ ನಿಯಂತ್ರಣಕ್ಕೆ ಆದ್ಯತೆ - ಸಚಿವ ಪ್ರಲ್ಹಾದ್ ಜೋಶಿ
3. ರಕ್ಷಣಾ ಸಚಿವ ರಾಜನಾಥ್ ಸಿಂಗ್ ನಾಳೆ ಸಿಕ್ಕಿಂಗೆ ಭೇಟಿ: ಭಾರತ - ಚೀನಾ ಗಡಿ ಭಾಗದಲ್ಲಿ ಯೋಧರೊಂದಿಗೆ ದೀಪಾವಳಿ ಆಚರಣೆ
4. ವೆಲ್ಲಿಂಗ್ಟನ್ ಏಕದಿನ ಕ್ರಿಕೆಟ್: ಭಾರತಕ್ಕೆ ೧೫೫ ರನ್‌ಗಳ ಗುರಿ ನೀಡಿದ ನ್ಯೂಜಿಲೆಂಡ್

<><><><>

ವಂದೇ ಮಾತರಂ ಗೀತೆಗೆ ೧೫೦ ವರ್ಷ ಪೂರ್ಣಗೊಂಡಿರುವ ಹಿನ್ನೆಲೆಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ವಂದೇ ಮಾತರಂ ಗೀತೆಗೆ ಶುಭ ಹಾರೈಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ತಮ್ಮ ಅನಿಸಿಕೆ ಹಂಚಿಕೊಂಡಿರುವ ಅವರು, ವಂದೇ ಮಾತರಂ, ಸ್ವಾತಂತ್ರ್ಯ ಹೋರಾಟದಲ್ಲಿ ರಾಷ್ಟ್ರಾಭಿಮಾನ ಮೂಡಿಸುವಲ್ಲಿ ಪ್ರಮುಖ ಪಾತ್ರ ವಹಿಸಿದೆ ಎಂದಿದ್ದಾರೆ. ಧೈರ್ಯ, ಏಕತೆಯ ಪ್ರತೀಕವಾಗಿ ವಂದೇ ಮಾತರಂ ನಮ್ಮ ಮನಗಳಲ್ಲಿ ಭದ್ರವಾಗಿ ಬೇರೂರಿದೆ. ಈ ಗೀತೆ ರಾಷ್ಟ್ರದ ಅಸ್ಮಿತೆಯಾಗಿದ್ದು, ತಾಯ್ನೆಲದ ಬಗ್ಗೆ ಗೌರವ ಮತ್ತು ದೈವಿಕ ಭಾವನೆ ಮೂಡಿಸುತ್ತಿದೆ. ವಂದೇ ಮಾತರಂ ದೇಶ ಮೊದಲು ಎಂ ಪರಿಕಲ್ಪನೆ ನೀಡಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ.

<><><><>

ಕೇಂದ್ರ ಸರ್ಕಾರದಿಂದ ಕರ್ನಾಟಕ ಸೇರಿದಂತೆ ದಕ್ಷಿಣ ಭಾರತದ ರಾಜ್ಯಗಳಿಗೆ 'ಭಾರತ್ ರೈಸ್' ಅನ್ನು ಹೆಚ್ಚುವರಿ ಹಂಚಿಕೆ ಮಾಡಲಾಗಿದೆ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ. ಕೇಂದ್ರ ಸರ್ಕಾರ ಆಹಾರ ಧಾನ್ಯಗಳ, ವಿಶೇಷವಾಗಿ ಅಕ್ಕಿ

ಬೆಲೆಯನ್ನು ಅತಿ ಸೂಕ್ಷ್ಮವಾಗಿ ಗಮನಿಸುತ್ತಿದ್ದು, ದೇಶೀಯವಾಗಿ ಪೂರೈಕೆ ಜೊತೆಗೆ ಬೆಲೆ ಸ್ಥಿರತೆ ಕಾಯ್ದುಕೊಳ್ಳಲು, ಅಕ್ರಮ ದಾಸ್ತಾನು ತಡೆಯಲು ಮತ್ತು ಗ್ರಾಹಕರ ಹಿತಾಸಕ್ತಿ ರಕ್ಷಣೆಗಾಗಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುತ್ತಿದೆ ಎಂದಿದ್ದಾರೆ. ದೇಶಾದ್ಯಂತ ಅದರಲ್ಲೂ ವಿಶೇಷವಾಗಿ ದಕ್ಷಿಣ ರಾಜ್ಯಗಳಲ್ಲಿ ಅಕ್ಕಿ ಲಭ್ಯತೆ ಹೆಚ್ಚಿಸಲು ನಫೆಡ್, ಎನ್‌ಸಿಸಿಎಫ್ ಮತ್ತು ಕೇಂದ್ರೀಯ ಭಂಡಾರ್‌ಗೆ 'ಭಾರತ್ ರೈಸ್'ಅನ್ನು ಹೆಚ್ಚುವರಿಯಾಗಿ ಹಂಚಿಕೆ ಮಾಡಲಾಗಿದೆ. ಅಲ್ಲದೆ, ಗ್ರಾಹಕರಿಗೆ ಸುಲಭವಾಗಿ ಭಾರತ್ ಅಕ್ಕಿ' ಕೈ ಸೇರುವಂತೆ ಮಾಡಲು ಹಾಗೂ ವಿತರಣಾ ವ್ಯವಸ್ಥೆ ವಿಸ್ತರಿಸಲು ಈ ಮೂರೂ ಸಂಸ್ಥೆಗಳಿಗೆ ಸೂಚನೆ ಸಹ ನೀಡಲಾಗಿದೆ ಎಂದು ಸಚಿವರು ಹೇಳಿದ್ದಾರೆ.

<><><><>

ದೇಶದ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿರುವ ವ್ಯಾಪಾರಿಗಳು, ಸಗಟು ವ್ಯಾಪಾರಿಗಳು, ದೊಡ್ಡ ಚಿಲ್ಲರೆ ವ್ಯಾಪಾರ ಸರಪಳಿಗಳು ಮತ್ತು ಸಂಸ್ಕರಣಾ ಘಟಕಗಳು ತಮ್ಮ ಬಳಿ ಇರುವ ಅಕ್ಕಿ ಮತ್ತು ಭತ್ತದ ದಾಸ್ತಾನಿನ ವಿವರವನ್ನು ಘೋಷಿಸಬೇಕೆಂದು ಕೇಂದ್ರ ಸರ್ಕಾರ ನಿರ್ದೇಶನ ನೀಡಿದೆ. ವಿಶೇಷವಾಗಿ ಕರ್ನಾಟಕ ಸೇರಿದಂತೆ ಆಂಧ್ರಪ್ರದೇಶ, ಕೇರಳ, ತಮಿಳುನಾಡು ಮತ್ತು ತೆಲಂಗಾಣ ರಾಜ್ಯ ಸರ್ಕಾರಗಳು ಭತ್ತ ಮತ್ತು ಅಕ್ಕಿಯ ಮೇಲೆ ದಾಸ್ತಾನು ಮಿತಿಗಳನ್ನು ವಿಧಿಸಲು ಕೇಂದ್ರ ಸರ್ಕಾರ ಅನುಮತಿ ನೀಡಿದೆ. ಈ ದಾಸ್ತಾನು ಮಿತಿಗಳು ಮುಂದಿನ ವರ್ಷದ ಜನವರಿ ೩೧ರ ವರೆಗೆ ಜಾರಿಯಲ್ಲಿರುತ್ತವೆ. ಅಕ್ಕಿ ಮತ್ತು ಭತ್ತವನ್ನು ದಾಸ್ತಾನು ಮಾಡಿಕೊಂಡಿರುವ ಎಲ್ಲಾ ಸಂಸ್ಥೆಗಳು, ಪ್ರತಿ ಶುಕ್ರವಾರ 'ಫುಡ್ ಸ್ಟಾಕ್ ಪೋರ್ಟಲ್' ನಲ್ಲಿ ತಮ್ಮ ದಾಸ್ತಾನಿನ ವಿವರವನ್ನು ಬಹಿರಂಗಪಡಿಸಬೇಕು. ಈ ಪೋರ್ಟಲ್‌ನಲ್ಲಿ ನೋಂದಾಯಿಸಿಕೊಳ್ಳದ ಸಂಸ್ಥೆಗಳು ಅಥವಾ ನಿಗದಿತ ದಾಸ್ತಾನು ಮಿತಿ ಉಲ್ಲಂಘಿಸುವ ಸಂಸ್ಥೆಗಳ ವಿರುದ್ಧ ಅಗತ್ಯ ಸರಕುಗಳ ಕಾಯ್ದೆ' ಅಡಿಯಲ್ಲಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವಾಲಯ ಎಚ್ಚರಿಸಿದೆ. ಕೇಂದ್ರ ಸರ್ಕಾರ, ಆಹಾರ ಧಾನ್ಯಗಳು, ವಿಶೇಷವಾಗಿ ಅಕ್ಕಿಯ ಬೆಲೆಗಳನ್ನು ಸೂಕ್ಷ್ಮವಾಗಿ ಗಮನಿಸುತ್ತಿದೆ. ದೇಶೀಯವಾಗಿ ಸಾಕಷ್ಟು ಪೂರೈಕೆ ಲಭ್ಯವಿರುವಂತೆ ನೋಡಿಕೊಳ್ಳಲು, ಬೆಲೆ ಸ್ಥಿರತೆ ಕಾಯ್ದುಕೊಳ್ಳಲು, ಅಕ್ರಮ ದಾಸ್ತಾನು ತಡೆಯಲು ಮತ್ತು ಗ್ರಾಹಕರ ಹಿತಾಸಕ್ತಿ ರಕ್ಷಿಸಲು ಹಲವಾರು ಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದು ಸಚಿವಾಲಯ ಹೇಳಿದೆ.

<><><><>

ರಕ್ಷಣಾ ಸಚಿವ ರಾಜನಾಥ್ ಸಿಂಗ್ ನಾಳೆ ಸಿಕ್ಕಿಂಗೆ ಭೇಟಿ ನೀಡಲಿದ್ದು, ಭಾರತ - ಚೀನಾ ಗಡಿ ಭಾಗದಲ್ಲಿ ನಿಯೋಜನೆಗೊಂಡಿರುವ ಸೇನಾ ಯೋಧರೊಂದಿಗೆ ದೀಪಾವಳಿ ಆಚರಿಸಲಿದ್ದಾರೆ. ನಾಥುಲಾ ಬಳಿ ಇರುವ ಶರತಂಗ್ ಯುದ್ಧ ಸ್ಮಾರಕಕ್ಕೆ ಭೇಟಿ ನೀಡಿ, ವೀರ ಯೋಧರ ಸ್ಮಾರಕಗಳಿಗೆ ಗೌರವ ನಮನ ಸಲ್ಲಿಸಲಿದ್ದಾರೆ. ಬಳಿಕ ರಾಜನಾಥ್ ಸಿಂಗ್, ಸೇನಾ ಸಿಬ್ಬಂದಿ ಜೊತೆ ಸಂವಾದ ನಡೆಸಲಿದ್ದಾರೆ.

<><><><>

ಕಡ್ಡಾಯ ನಿವೃತ್ತಿಯು ದಂಡನಾತ್ಮಕ ಕ್ರಮವಲ್ಲ, ಅದು ಉದ್ಯೋಗಿಯೊಬ್ಬರ ವಿರುದ್ಧದ ದುರ್ನಡತೆಯ ಆರೋಪವಲ್ಲ ಎಂದು ಸುಪ್ರೀಂಕೋರ್ಟ್ ಹೇಳಿದೆ. ನ್ಯಾಯಮೂರ್ತಿಗಳಾದ ಮನಮೋಹನ್ ಹಾಗೂ ಚಂದ್ರಶೇಖರ್ ಅವರಿದ್ದ ಪೀಠ, ಚತ್ತೀಸ್‌ಗಢ ಸರ್ಕಾರ ೧೪ ಉದ್ಯೋಗಿಗಳ ಪೈಕಿ ಐವರನ್ನು ಕಡ್ಡಾಯವಾಗಿ ನಿವೃತ್ತಿಗೊಳಿಸಲು ತೆಗೆದುಕೊಂಡಿದ್ದ ತೀರ್ಮಾನವನ್ನು ಎತ್ತಿಹಿಡಿದಿದೆ. ಉದ್ಯೋಗಿಯೊಬ್ಬರ ಸೇವಾ ದಾಖಲೆ, ಕಾರ್ಯ ಕ್ಷಮತೆ, ಪ್ರಾಮಾಣಿಕತೆಯನ್ನು ಮೌಲ್ಯಮಾಪನ ಮಾಡಿದ ನಂತರ, ಸಾರ್ವಜನಿಕ ಹಿತದೃಷ್ಟಿಯಿಂದ ಇಂತಹ ನಿರ್ಧಾರಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ನ್ಯಾಯಪೀಠ ಹೇಳಿದೆ.

<><><><>

ವಾಣಿಜ್ಯ ಮತ್ತು ಕೈಗಾರಿಕಾ ಖಾತೆ ರಾಜ್ಯ ಸಚಿವ ಜಿತಿನ್ ಪ್ರಸಾದ್ ಅವರ ಮೂರು ದಿನಗಳ ಹಂಗೇರಿ ಪ್ರವಾಸ ಸಂಪನ್ನಗೊಂಡಿದೆ. ಈ ಸಂದರ್ಭದಲ್ಲಿ ಹಂಗೇರಿಯ ಪ್ರಮುಖ ನಾಯಕರು, ಸರ್ಕಾರಿ ಪ್ರತಿನಿಧಿಗಳು, ಕೈಗಾರಿಕಾ ವಲಯದ ಗಣ್ಯರು ಹಾಗೂ ಶೈಕ್ಷಣಿಕ ಸಂಸ್ಥೆಗಳೊಂದಿಗೆ ಉನ್ನತ ಮಟ್ಟದ ಸಭೆಗಳನ್ನು ನಡೆಸಿದರು. ಭಾರತ ಮತ್ತು ಹಂಗೇರಿ ನಡುವಿನ ವ್ಯಾಪಾರ, ಹೂಡಿಕೆ, ತಂತ್ರಜ್ಞಾನ, ನಾವೀನ್ಯತೆ ಹಾಗೂ ಕೈಗಾರಿಕಾ ಅಭಿವೃದ್ಧಿ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರವನ್ನು ಬಲಪಡಿಸುವುದು ಭೇಟಿಯ ಪ್ರಮುಖ ಉದ್ದೇಶವಾಗಿತ್ತು. ಹಂಗೇರಿ ರಾಷ್ಟ್ರೀಯ ಸಂಸತ್‌ನ ಉಪಸಭಾಪತಿಯನ್ನು ಭೇಟಿ ಮಾಡಿದ ಸಚಿವರು, ಉಭಯ ದೇಶಗಳ ನಡುವಿನ ಬಾಂಧವ್ಯ ವೃದ್ಧಿ ಹಾಗೂ ಭಾರತ-ಐರೋಪ್ಯ ಒಕ್ಕೂಟದ ಸಂಬಂಧಗಳ ಹಿನ್ನೆಲೆಯಲ್ಲಿ ಸಹಕಾರ ವಿಸ್ತರಣೆಯ ಅವಕಾಶಗಳ ಕುರಿತು ಚರ್ಚಿಸಿದರು. ಹಂಗೇರಿಯ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರೊಂದಿಗೂ ಮಾತುಕತೆ ನಡೆಸಿದ ಅವರು, ಆಧುನಿಕ ತಂತ್ರಜ್ಞಾನಗಳು, ಸಂಶೋಧನೆ ಹಾಗೂ ನಾವೀನ್ಯತೆ ಕ್ಷೇತ್ರಗಳಲ್ಲಿ ಸಹಕಾರ ವೃದ್ಧಿಸುವ ಕುರಿತು ಸಮಾಲೋಚನೆ ನಡೆಸಿದರು. ಬುಡಾಪೆಸ್ಟ್‌ನಲ್ಲಿ ನಡೆದ

ಭಾರತ-ಹಂಗೇರಿ ಉದ್ಯಮ ವಿಚಾರ ಸಂಕಿರಣದಲ್ಲಿ ಮಾತನಾಡಿ, ಉಭಯ ದೇಶಗಳ ಕಂಪನಿಗಳು ಪರಸ್ಪರ ಪಾಲುದಾರಿಕೆಯನ್ನು ಬಲಪಡಿಸುವುದರ ಜೊತೆಗೆ ಹೊಸ ಹೂಡಿಕೆ ಅವಕಾಶಗಳನ್ನು ಅನ್ವೇಷಿಸುವಂತೆ ಕರೆ ನೀಡಿದರು.

<><><><>

ಕ್ಯಾನ್ಸರ್ ಬಗ್ಗೆ ಜನ ಜಾಗೃತಿ ಅಗತ್ಯವಾಗಿದ್ದು, ರೋಗದ ಮುನ್ಸೂಚನೆಗಳನ್ನು ಅರಿತು ಸೂಕ್ತ ತಪಾಸಣೆ ಮೂಲಕ ಕ್ಯಾನ್ಸರ್ ನಿರ್ಮೂಲನೆಗೆ ಆದ್ಯತೆ ನೀಡಬೇಕು ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ. ನಡ್ಡಾ ಹೇಳಿದ್ದಾರೆ. ರಾಷ್ಟ್ರೀಯ ಕ್ಯಾನ್ಸರ್ ಜಾಗೃತಿ ದಿನದ ಹಿನ್ನೆಲೆಯಲ್ಲಿಂದು ಸಾಮಾಜಿಕ ಮಾಧ್ಯಮದಲ್ಲಿ ಅವರು, ಕ್ಯಾನ್ಸರ್ ವಿರುದ್ಧ ಹೋರಾಡಲು ಅರಿವು ಜೊತೆಗೆ ತಪಾಸಣೆಗೆ ಪ್ರಧಾನ ಆದ್ಯತೆ ನೀಡಬೇಕು. ಜನತೆ ತಂಬಾಕು, ಮದ್ಯಪಾನ, ಮಾದಕ ವಸ್ತುಗಳನ್ನು ತ್ಯಜಿಸಿ, ದೈಹಿಕ ಚಟುವಟಿಕೆ, ವ್ಯಾಯಾಮ, ಉತ್ತಮ ಜೀವನಶೈಲಿಯನ್ನು ರೂಪಿಸಿಕೊಳ್ಳಬೇಕು ಎಂದು ಹೇಳಿದ್ದಾರೆ.

<><><><>

ಭಾರತ ಬರುವ ೨೦೩೦ರ ವೇಳೆಗೆ ೩೦೦ ದಶಲಕ್ಷ ಟನ್ ಮತ್ತು ೨೦೪೭ರ ವೇಳೆಗೆ ೫೦೦ ದಶಲಕ್ಷ ಟನ್ ಉಕ್ಕು ಉತ್ಪಾದಿಸುವ ಗುರಿಯನ್ನು ಹೊಂದಿದೆ ಎಂದು ಕೇಂದ್ರ ಕಲ್ಲಿದ್ದಲು ಮತ್ತು ಗಣಿ ಸಚಿವ ಜಿ. ಕಿಶನ್ ರೆಡ್ಡಿ ತಿಳಿಸಿದ್ದಾರೆ. ಹೆಚ್ಚುತ್ತಿರುವ ಬೇಡಿಕೆ ಪೂರೈಸಲು ಮತ್ತು ಉಕ್ಕನ್ನು ಹೆಚ್ಚು ಕೈಗೆಟುಕುವ ದರದಲ್ಲಿ ಲಭ್ಯವಾಗುವಂತೆ ಮಾಡಲು, ಸರ್ಕಾರ ಕಬ್ಬಿಣದ ಅದಿರು ಉತ್ಪಾದನೆಯನ್ನು ಹೆಚ್ಚಿಸುವತ್ತ ಗಮನಹರಿಸುತ್ತಿದೆ ಎಂದರು. ಗೋವಾದಲ್ಲಿ ನಡೆದ ಗಣಿ ಸಚಿವರ ನಾಲ್ಕನೇ ಸಮ್ಮೇಳನದ ಸಮಾರೋಪದ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವರು, ಗಣಿಗಾರಿಕೆ ವಲಯದಲ್ಲಿ ಪರಿಶೋಧನೆಯ ವಿಸ್ತರಣೆ, ಖನಿಜ ಉತ್ಪಾದನೆಯ ಹೆಚ್ಚಳ ಮತ್ತು ಅಧಿಕ ಪಾರದರ್ಶಕತೆಯ ಮೂಲಕ ಈ ವಲಯವನ್ನು ಬಲಪಡಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತಿದೆ. ಪ್ರಸ್ತುತ ಭಾರತ ವಾರ್ಷಿಕವಾಗಿ ಸುಮಾರು ೧೫೮ ದಶಲಕ್ಷ ಟನ್ ಉಕ್ಕು ಉತ್ಪಾದಿಸುತ್ತಿದೆ ಎಂದು ಹೇಳಿದರು.

<><><><>

ಮಾಲಿ, ಮ್ಯಾನ್ಮಾರ್, ಮಡಗಾಸ್ಕರ್ ಹಾಗೂ ಈಕ್ವಟೋರಿಯಲ್ ಗಿನಿಯಾ ದೇಶಗಳ ರಾಯಭಾರಿಗಳು ಭಾರತಕ್ಕೆ ಭೇಟಿ ನೀಡಿದ್ದು, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಿ, ನಿಯೋಜನಾ ಪತ್ರಗಳನ್ನು ಸಲ್ಲಿಸಿದ್ದಾರೆ.

ದೆಹಲಿಯ ರಾಷ್ಟ್ರಪತಿ ಭವನದಲ್ಲಿ ನಡೆದ ವಿಶೇಷ ಸಮಾರಂಭದಲ್ಲಿ ಈ ಕಾರ್ಯಕ್ರಮ ನಡೆಯಿತು. ಮಾಲಿ ಗಣರಾಜ್ಯದ ರಾಯಭಾರಿ ಫಟೋಮಾ ಥೆರಾ, ಮ್ಯಾನ್ಮಾರ್ ಒಕ್ಕೂಟ ಗಣರಾಜ್ಯದ ರಾಯಭಾರಿ ಯು ಆಯೆ ಮಿನ್ ಹ್ಟೆ, ಮಡಗಾಸ್ಕರ್ ಗಣರಾಜ್ಯದ ರಾಯಭಾರಿ ಮಂಡೆ ಹತ್ಸಾರ ಜಾರ್ಜೆಟ್ ಹಾಗೂ ಈಕ್ವಟೋರಿಯಲ್ ಗಿನಿಯಾ ಗಣರಾಜ್ಯದ ರಾಯಭಾರಿ ಮಿಗುಯೆಲ್ ಎಡ್ಜಾಂಗ್ ಅಂಗ್ಯೂ ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ತಮ್ಮ ನಿಯೋಜನಾ ಪತ್ರಗಳನ್ನು ಹಸ್ತಾಂತರಿಸಿದರು. ರಾಷ್ಟ್ರಪತಿ ಭವನದಲ್ಲಿ ನಡೆದ ಈ ಸಮಾರಂಭವು ಭಾರತ ಮತ್ತು ಈ ನಾಲ್ಕು ದೇಶಗಳ ನಡುವಿನ ರಾಜತಾಂತ್ರಿಕ ಸಂಬಂಧಗಳ ಬಲವರ್ಧನೆಗೆ ಪ್ರಮುಖ ಪ್ರಕ್ರಿಯೆಯಾಗಿದೆ.

<><><><>

೬ನೇ ಹಜ್ ಸಮ್ಮೇಳನ ಮತ್ತು ಪ್ರದರ್ಶನ-೨೦೨೬ರಲ್ಲಿ ಪಾಲ್ಗೊಳ್ಳಲು ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಸೌದಿ ಅರೇಬಿಯಾದ ಜೆದ್ದಾ ತಲುಪಿದ್ದಾರೆ. ಈ ಸಂದರ್ಭದಲ್ಲಿ ಸೌದಿ ಅರೇಬಿಯಾ ಜೊತೆಗಿನ ದ್ವಿಪಕ್ಷೀಯ ಹಜ್ ಒಪ್ಪಂದಕ್ಕೆ ಸಹಿ ಹಾಕುವ ಕಾರ್ಯಕ್ರಮದಲ್ಲಿ ಸಚಿವರು ಭಾಗವಹಿಸಲಿದ್ದಾರೆ. ಜೊತೆಗೆ ೨೦೨೬ರ ಹಜ್ ಯಾತ್ರೆಗೆ ಸಂಬಂಧಿಸಿದ ಸಿದ್ಧತೆಗಳನ್ನು ಪರಿಶೀಲಿಸಲಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಸಚಿವ ಕಿರಣ್ ರಿಜಿಜು, ತಮ್ಮ ಭೇಟಿಯ ವೇಳೆ ನಡೆಯಲಿರುವ ಸಭೆಗಳು ಮತ್ತು ಮಾತುಕತೆಗಳು ಫಲಪ್ರದವಾಗುವ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಭಾರತದಿಂದ ಹಜ್ ಯಾತ್ರೆ ಕೈಗೊಳ್ಳುವ ಎಲ್ಲಾ ಯಾತ್ರಾರ್ಥಿಗಳಿಗೆ ಸುಗಮ, ಸುರಕ್ಷಿತ ಹಾಗೂ ಆರಾಮದಾಯಕ ಪ್ರಯಾಣದ ವ್ಯವಸ್ಥೆ ಕಲ್ಪಿಸುವುದು ಈ ಭೇಟಿಯ ಪ್ರಮುಖ ಉದ್ದೇಶವಾಗಿದೆ ಎಂದು ಅವರು ತಿಳಿಸಿದ್ದಾರೆ.

<><><><>

ಭಾರತ - ನ್ಯೂಜಿಲೆಂಡ್ ನಡುವೆ ಐದು ಪಂದ್ಯಗಳ ಪುರುಷರ ಏಕದಿನ ಕ್ರಿಕೆಟ್ ಸರಣಿಯ ಎರಡನೇ ಪಂದ್ಯ ವೆಲ್ಲಿಂಗ್ಟನ್ ಕ್ರೀಡಾಂಗಣದಲ್ಲಿ ನಡೆಯುತ್ತಿದೆ. ಮೊದಲು ಬ್ಯಾಟ್ ಮಾಡಿದ ನ್ಯೂಜಿಲೆಂಡ್, ೪೧ ಓವರ್‌ಗಳಲ್ಲಿ ೧೩೪ ರನ್‌ಗಳಿಗೆ ಆಲೌಟ್ ಆಯಿತು. ೧೩೫ರನ್‌ಗಳ ಗುರಿ ಬೆನ್ನತ್ತಿರುವ ಭಾರತ, ಇತ್ತೀಚಿನ ವರದಿ ಬಂದಾಗ ೯ ಓವರ್‌ಗಳಲ್ಲಿ ೩ ವಿಕೆಟ್ ನಷ್ಟಕ್ಕೆ ೩೯ ರನ್ ಗಳಿಸಿ ಆಡುತ್ತಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>